ಶ್ರೀ ಬಿ. ಬಸವಲಿಂಗಪ್ಪ(ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಮತ್ತು ಪಶುಸಂಗೋಪನಾ ಸಚಿವರು).—

ಅ) ಹೌದು

ಆ) ಹೌದು

ಇ) ಈ ಬಗ್ಗೆ ಸಹಕಾರ ಸಂಘಗಳ ನಿಬಂಧಕರ ಮುಖಾಂತರ ವಿಚಾರಣೆ ನಡೆಸುವಂತೆ ಸಹಕಾರ ಇಲಾಖೆಗೆ ತಿಳಿಸಿದೆ. ವಿಚಾರಣಾ ವರದಿ ಬಂದ ತಕ್ಷಣ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಆರೋಗ್ಯ ಇಲಾಖೆಯ ವೈದ್ಯರುಗಳ ಅನಧಿಕೃತ ಗೈರು ಹಾಜರಿ ಬಗ್ಗೆ

೨೧೯. ಶ್ರೀ ಎಂ. ರಾಮಪ್ಪ(ಬಳ್ಳಾರಿ).—ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿ ಕೆಲವು ಸರ್ಕಾರಿ ವೈದ್ಯರುಗಳು ಅನಧಿಕೃತವಾಗಿ ಉಳಿದಂ ಮತ್ತು ವಿದೇಶದಲ್ಲಿ ಇರುವ ಕಂಠಿತು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಅಂತಾ ವೈದ್ಯರುಗಳ ವಿರುದ್ಧ ಸರ್ಕಾರ ತೆಗೆದುಕೊಳ್ಳಬೇಕಾಗಿರುವ ಕ್ರಮ ವೇನು ?

ಶ್ರೀಮತಿ ಮನೋರಮಾ ಮಧ್ವರಾಜ್(ಆರೋಗ್ಯ ಮತು ಕುಟುಂಬ ಕಲ್ಯಾಣ ಮಂತ್ರಿಗಳು).—

ಅ) ಬಂದಿದೆ.

ಆ) ಇಂತಹ ವೈದ್ಯರುಗಳ ವಿರುದ್ಧ ನಿಯಮಗಳ ಪ್ರಕಾರ ಶಿಸ್ತು ಕ್ರಮ ತೆಗೆದು ಕೊಳ್ಳಲಾಗುತ್ತಿದೆ.

ಬಳ್ಳಾರಿಯ ವೈದ್ಯಕೀಯ ವಿದ್ಯಾಲಯ ಆಸ್ಪತ್ರೆಯಲ್ಲಿ ಸ್ಕಿನ್ ಮತ್ತು ಎಸ್ ಟಿ ಡಿ ವಿಭಾಗ ಪ್ರಾರಂಭಿಸುವ ಬಗ್ಗೆ

೨೨೧. ಶ್ರೀ ಎಂ. ರಾಮಪ್ಪ (ಬಳ್ಳಾರಿ).—ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ವೈದ್ಯಕೀಯ ವಿದ್ಯಾಲಯ ಆಸ್ಪತ್ರೆ ಬಳ್ಳಾರಿಯಲ್ಲಿ ಸ್ಕಿನ್ ಮತ್ತು ಎಸ್‌ಟಿಡಿ ವಿಭಾಗದಲ್ಲಿ ಪ್ರಾರಂಭದಿಂದಲೂ ಒಂದೇ ಒಂದು ಘಟಕವು ಕೆಲಸ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಈ ವೈದ್ಯಕೀಯ ವಿದ್ಯಾಲಯದಲ್ಲಿ ಸ್ನಾತಕೋತ್ತರ ವ್ಯಾಸಂಗ ಇರುವುದರಿಂದ ಎರಡು ಘಟಕಗಳು ಬೇಕಾಗುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ?

ಇ) ಹಾಗಾದರೆ ವೈದ್ಯಕೀಯ ವಿದ್ಯಾಲಯಕ್ಕೆ ಇನ್ನೊಂದು ಘಟಕವನ್ನು ಪ್ರಾರಂಭಿಸಲು ಸರ್ಕಾರದಲ್ಲಿ ಪ್ರಸ್ತಾವನೆ ಇದೆಯೇ ?

ಶ್ರೀಮತಿ ಮನೋರಮಾ ಮಧ್ವರಾಜ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು).—

ಅ) ಹೌದು

ಆ) ಹೌದು

ಇ) ವೈದ್ಯಕೀಯ ವಿದ್ಯಾಲಯ, ಬಳ್ಳಾರಿಯ ಸ್ಕಿನ್ ಮತ್ತು ಎಸ್‌ಟಿಡಿ ವಿಭಾಗದಲ್ಲಿ ಇನ್ನೊಂದು ಘಟಕವನ್ನು ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.